ಶಿವಮೊಗ್ಗ,ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ.,
ಮಾಚೇನಹಳ್ಳಿ, ನಿದಿಗೆ(ಅಂಚೆ), ಶಿವಮೊಗ್ಗ- 577 222, ☎ 08182-246165 www.shimul.coop

ಐ.ಎಫ್.ಟಿ. ಸಂಖ್ಯೆ/ಶಿಸಹಾಒ/ಸಂಸ್ಕರಣೆ-ಸಾರಿಗೆ/ಟೆಂಡರ್/01/5640/2016-17/ ದಿನಾಂಕ: 19.10.2016

## ಹಾಲಿನ ಟ್ಯಾಂಕರ್‌ಗಳು ಮತ್ತು ಹಾಲು ವಿತರಣಾ ಮಾರ್ಗಗಳಿಗೆ ದ್ವೈವಾರ್ಷಿಕ ಗುತ್ತಿಗೆ ಅವಧಿಗೆ ವಾಹನ ಒದಗಿಸಲು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಟೆಂಡರ್ ಪ್ರಕಟಣೆ

ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಹಾಲು ಒಕ್ಕೂಟದ ವ್ಯಾಪ್ತಿಯಲ್ಲಿ ಬಿ.ಎಂ.ಸಿ ಮಾರ್ಗಗಳಿಗೆ ಹಾಲಿನ ಟ್ಯಾಂಕರ್‌ಗಳನ್ನು ಒದಗಿಸಲು ಮತ್ತು ಹಾಲು ವಿತರಣಾ ಮಾರ್ಗಗಳಿಗೆ ವಾಹನ ಒದಗಿಸಲು ದ್ವೈವಾರ್ಷಿಕ ಅವಧಿಗೆ ಗುತ್ತಿಗೆ ಅಧಾರದಲ್ಲಿ ಟೆಕ್ನಿಕಲ್/ಕಮರ್ಷಿಯಲ್(ದರ) ಹೊಂದಿದ ಪ್ರತ್ಯೇಕ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ.

### I. ಹಾಲಿನ ಟ್ಯಾಂಕರ್ ಮಾರ್ಗಗಳ ವಿವರ

| ಕ್ರ. ಸಂ | ಬಿ.ಎಂ.ಸಿ. ಟ್ಯಾಂಕರ್ ಮಾರ್ಗದ ಹೆಸರು (02 ವರ್ಷದ ಅವಧಿ) | ಸಾಮರ್ಥ್ಯ | ದಿವಹಿ ಅಂತರ | ಇ.ಎಂ.ಡಿ | ಭದ್ರತಾ ಠೇವಣಿ |
|---|---|---|---|---|---|
| 1 | ದಾವಣಗೆರೆ ಬಿ.ಎಂ.ಸಿ ಟ್ಯಾಂಕರ್ ಮಾರ್ಗ – 3 (ನಲ್ಕುದರೆ, ಬಾಡ, ಗೋಪನಾಳ, ಶ್ಯಾಗಲೆ) | 12,000 ಲೀ. | 84 ಕಿ.ಮೀ | 50,000/- | 2,00,000/- |
| 2 | ಶಿವಮೊಗ್ಗ ಬಿ.ಎಂ.ಸಿ ಟ್ಯಾಂಕರ್ ಮಾರ್ಗ – 5 (ಕಟ್ಟೆಹಕ್ಲು, ಸಂಕದಹೊಳೆ, ಕಲ್‌ಕೊಪ್ಪ) | 9,000 ಲೀ. | 181 ಕಿ.ಮೀ | 50,000/- | 2,00,000/- |

### II. ಹಾಲು ವಿತರಣಾ ಮಾರ್ಗಗಳ ವಿವರ

| ಕ್ರ. ಸಂ | ಹಾಲು ವಿತರಣಾ ಮಾರ್ಗಗಳ ಹೆಸರು (02 ವರ್ಷದ ಅವಧಿ) | ಸಾಮರ್ಥ್ಯ | ದಿನವಹಿ ಅಂತರ | ಇ.ಎಂ.ಡಿ | ಭದ್ರತಾ ಠೇವಣಿ |
|---|---|---|---|---|---|
| 1 | ಹರಿಹರ ಮಾರ್ಗ | 500 ಕ್ರೇಟ್ | 46 ಕಿ.ಮೀ | 25,000/- | 2,00,000/- |
| 2 | ಶಿವಮೊಗ್ಗ ಡೇ ಕೌಂಟರ್ ಮಾರ್ಗ -2 | ಟಾಟಾ ಎಸ್ | 45 ಕಿ.ಮೀ | 25,000/- | 1,00,000/- |
| 3 | ದಾವಣಗೆರೆ ಡೇ ಕೌಂಟರ್ ಮಾರ್ಗ -1 | ಟಾಟಾ ಎಸ್ | 50 ಕಿ.ಮೀ | 25,000/- | 50,000/- |
| 4 | ದಾವಣಗೆರೆ ಡೇ ಕೌಂಟರ್ ಮಾರ್ಗ -2 | ಟಾಟಾ ಎಸ್ | 50 ಕಿ.ಮೀ | 25,000/- | 50,000/- |
| 5 | ದಾವಣಗೆರೆ ಡೇ ಕೌಂಟರ್ ಮಾರ್ಗ -3 | ಟಾಟಾ ಎಸ್ | 50 ಕಿ.ಮೀ | 25,000/- | 50,000/- |
| 6 | ದಾವಣಗೆರೆ ಡೇ ಕೌಂಟರ್ (ಡಿ.ಸಿ.ಎಂ) | ಟಾಟಾ ಎಸ್ | 38 ಕಿ.ಮೀ | 25,000/- | 50,000/- |

ಮೇಲ್ಕಂಡ ಬಿ.ಎಂ.ಸಿ ಮಾರ್ಗಗಳಿಗೆ ಹಾಲಿನ ಟ್ಯಾಂಕರ್‌ಗಳನ್ನು ಮತ್ತು ಹಾಲು ವಿತರಣಾ ಮಾರ್ಗಗಳಿಗೆ ವಾಹನಗಳನ್ನು ಒದಗಿಸಲು ದ್ವೈವಾರ್ಷಿಕ ಅವಧಿಗೆ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ https://eproc.karnataka.gov.in ಮೂಲಕ (ಟೆಕ್ನಿಕಲ್/ಕಮರ್ಷಿಯಲ್) ಟೆಂಡರ್ ಕರೆಯಲಾಗಿದ್ದು ವಾಹನಗಳನ್ನು ಹೊಂದಿರುವ ಮಾಲೀಕರು/ ಅರ್ಹ ಗುತ್ತಿಗೆದಾರರು / ಸಂಸ್ಥೆಗಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ

| | | |
|---|---|---|
| 1 | ಟೆಂಡರ್ ಡೌನ್‌ಲೋಡ್ ಮಾಡಿಕೊಳ್ಳುವ | ದಿನಾಂಕ: 25-10-2016 ರಿಂದ |
| 2 | ಟೆಂಡರ್ ಫಾರಂಗಳನ್ನು ಇ-ಟೆಂಡರ್ ಮೂಲಕ ಸಲ್ಲಿಸಲು ಕೊನೆಯ | ದಿನಾಂಕ: 25.11.2016 ರಂದು ಸಂಜೆ: 17.30 ಗಂಟೆಯವರೆಗೆ |
| 3 | ಟೆಕ್ನಿಕಲ್ ಟೆಂಡರ್ ತೆರೆಯುವ ದಿನ | ದಿನಾಂಕ: 28.11.2016 ರಂದು ಬೆಳಿಗ್ಗೆ: 11.30 ಗಂಟೆಗೆ |
| 4 | ಕಮರ್ಷಿಯಲ್ ಟೆಂಡರ್‌ಗಳನ್ನು ತೆರೆಯುವ ದಿನ | ದಿನಾಂಕ: 01.12.2016 ರಂದು ಬೆಳಿಗ್ಗೆ: 11.30 ಗಂಟೆಗೆ |

### ಕ್ರಮ ಸಂಖ್ಯೆ (1) ರ ಬಿ.ಎಂ.ಸಿ ಮಾರ್ಗಗಳಿಗೆ ಸಂಬಂಧಿಸಿದಂತೆ ಷರತ್ತು ಮತ್ತು ನಿಬಂಧನೆಗಳು

1. ಟೆಂಡರ್ ಸಲ್ಲಿಸ ಬಯಸುವವರು ತಮ್ಮ ಹೆಸರಿಗೆ ಕಡ್ಡಾಯವಾಗಿ ವಾಹನವನ್ನು ಮತ್ತು ದಾಖಲಾತಿಗಳನ್ನು ಹೊಂದಿರತಕ್ಕದ್ದು.
2. ಇ-ಪ್ರೊಕ್ಯೂರ್‌ಮೆಂಟ್ ನಿಯಾಮವಳಿ ಅಡಿ ನೊಂದಣಿ ಮಾಡಿಸದ ಗುತ್ತಿಗೆದಾರರು ನೊಂದಣಿ ಮಾಡಿಸಿ ಗುತ್ತಿಗೆ ಅರ್ಜಿ ಸಲ್ಲಿಸಬಹುದು.
3. ಒಕ್ಕೂಟದ ವ್ಯಾಪ್ತಿಯಲ್ಲಿನ ಬಿ.ಎಂ.ಸಿ ಸಂಘಗಳಿಂದ ಹಾಲು ಸಾಗಾಣಿಕೆ ಮಾಡಲು 2005ರ ಅಥವಾ ನಂತರದ ಮಾದರಿಯ 9,000 ಕೆ.ಜಿ ಮತ್ತು 12,000 ಕೆ.ಜಿ ಸಾಮರ್ಥ್ಯದ ಹಾಲು ಸಾಗಾಣಿಕೆ ಟ್ಯಾಂಕರ್ ಹೊಂದಿರುವ ಮಾಲೀಕರಿಂದ ಟೆಂಡರ್ ಆಹ್ವಾನಿಸಲಾಗಿದೆ. ಬಿ.ಎಂ.ಸಿ ಸಂಘಗಳಿಂದ ಹಾಲು ಪರೀಕ್ಷೆ ಮಾಡಿ ಹಾಲಿನ ಪ್ರಮಾಣವನ್ನು ಧೃಢೀಕರಿಸಿಕೊಂಡು ವಾಹನಕ್ಕೆ ತುಂಬಿಸಿಕೊಳ್ಳುವ ಜವಾಬ್ದಾರಿ ಗುತ್ತಿಗೆದಾರರದ್ದು. ಸಂಘದ ಹಾಲಿನ ಪ್ರಮಾಣ ಮತ್ತು ಗುಣಮಟ್ಟ ಡೈರಿಯಲ್ಲಿ ಪರಿಶೀಲಿಸಿದಾಗ ಹೊಂದಾಣಿಕೆಯಾಗಬೇಕು. ವ್ಯತ್ಯಾಸವಾದ್ದಲ್ಲಿ ಗುತ್ತಿಗೆದಾರರ ಬಿಲ್ಲಿನಲ್ಲಿ ಕಠವಾಣೆ ಮಾಡಲಾಗುವುದು. ದ್ವೈವಾರ್ಷಿಕ ಅವಧಿಗೆ ಗುತ್ತಿಗೆ ಅಧಾರದಲ್ಲಿ ವಾಹನ ಒದಗಿಸುವುದು.

ಮುಂದುವರೆದಿದೆ . . .

4. ಇ.ಎಂ.ಡಿ. ಮೊತ್ತವನ್ನು ಮಾರ್ಗದ ವಾಹನಗಳಿಗೆ ಅವುಗಳ ಮುಂದೆ ಸೂಚಿಸಿರುವಂತೆ ಇ.ಎಂ.ಡಿ ಬಾಬ್ತು ಡಿ.ಡಿ.ಯನ್ನು ಇ-ಪ್ರೋಕ್ಯೂರ್‌ಮೆಂಟ್ ವೇದಿಕೆಯ ನಿಯಾಮವಳಿಯಂತೆ ಸಲ್ಲಿಸುವುದು. ಕಡಿಮೆ ಇ.ಎಂ.ಡಿ ಪಾವತಿಸಿದಲ್ಲಿ ಟೆಂಡರ್‌ನ್ನು ತಿರಸ್ಕರಿಸಲಾಗುವುದು.
5. ಪ್ರತಿ ಮಾರ್ಗಕ್ಕೆ ಪ್ರತ್ಯೇಕ ಟೆಂಡರ್ ಮತ್ತು ಇ.ಎಂ.ಡಿ ಸಲ್ಲಿಸುವುದು. ಪ್ರತಿ ಕಿ.ಮೀ.ಗೆ ದರ ನಮೂದಿಸುವುದು ಮತ್ತು ದರವು ಎಲ್ಲಾ ತೆರಿಗೆಗಳನ್ನು ಒಳಗೊಂಡಿರುತ್ತದೆ. ಹಾಲಿನ ಟ್ಯಾಂಕರ್‌ಗಳಿಗೆ ರಾಜ್ಯ/ರಾಷ್ಟ್ರೀಯ ಹೆದ್ದಾರಿ ಶುಲ್ಕಗಳನ್ನು ಮತ್ತು ಸೇವಾ ತೆರಿಗೆಯನ್ನು ಗುತ್ತಿಗೆದಾರರೆ ಭರಿಸಬೇಕಾಗಿರುತ್ತದೆ. ಒಕ್ಕೂಟದ ವತಿಯಿಂದ ನೀಡಲಾಗುವುದಿಲ್ಲ.
6. ಕಿಲೋಮೀಟರ್ ಮತ್ತು ಮಾರ್ಗದ ಪಾಸಲೆ ಬದಲಾಗಬಹುದು. ಅದರಂತೆ ಕಿಲೋಮೀಟರ್ ಹೆಚ್ಚು ಅಥವಾ ಕಡಿಮೆಯಾಗಬಹುದು. ಟೆಂಡರ್‌ನಲ್ಲಿ ನಮೂದಿಸಿದ ಅಂತರವು ಶೇ.10 ಕ್ಕಿಂತ ಹೆಚ್ಚು ಅಥವಾ ಕಡಿಮೆಯಾದಲ್ಲಿ ಟೆಂಡರ್‌ನ ಮೂಲದರವನ್ನು ಪ್ರೋರೆಟಾ ಅಧಾರದ ಮೇಲೆ ಮರು ನಿಗಧಿಪಡಿಸುವ ಹಕ್ಕನ್ನು ವ್ಯವಸ್ಥಾಪಕ ನಿರ್ದೇಶಕರವರು ಹೊಂದಿರುತ್ತಾರೆ. ಮಾರ್ಗದ ವಿವರಗಳನ್ನೊಳಗೊಂಡ ಶೆಡ್ಯೂಲನ್ನು ಟೆಂಡರ್ ಫಾರಂನೊಂದಿಗೆ ಲಗತ್ತಿಸಲಾಗಿದೆ.
7. ಗುತ್ತಿಗೆದಾರರ ಸೇವೆ ತೃಪ್ತಿಕರವಾಗಿರದಿದ್ದಲ್ಲಿ ಮಾರ್ಗಗಳ ಗುತ್ತಿಗೆ ರದ್ದು ಮಾಡಲಾಗುವುದು. ಮಾರ್ಗಗಳ ಪುನರ್ ವಿಂಗಡನೆ ಮಾಡಲಾಗುವುದು. ಇವುಗಳ ಬಗ್ಗೆ ತನ್ನ ಹಿತದೃಷ್ಟಿಯಿಂದ ಒಕ್ಕೂಟವು ಅವಶ್ಯಕತೆಗನುಗುಣವಾಗಿ ತೆಗೆದುಕೊಳ್ಳುವ ನಿರ್ಣಯಗಳಿಗೆ ಗುತ್ತಿಗೆದಾರರು/ಟೆಂಡರ್‌ದಾರರು ಬದ್ಧವಾಗಿರಬೇಕು.
8. ಎಲ್ಲಾ ಸಾರಿಗೆ ಟೆಂಡರ್‌ದಾರರು ಶಾಸನ ಬದ್ಧವಾದ ರೀತಿಯಲ್ಲಿ ತಮ್ಮ ನೌಕರರಿಗೆ(ಚಾಲಕರು/ಕಂಡಕ್ಟರ್) ವೇತನ/ಭವಿಷ್ಯನಿಧಿ/ಇ.ಎಸ್.ಐ ಮುಂತಾದವುಗಳನ್ನು ಪಾವತಿಸಬೇಕಾಗಿರುತ್ತದೆ. ಟೆಂಡರ್ ಪಡೆದ ಸಾರಿಗೆ ಗುತ್ತಿಗೆದಾರರೇ ತಮ್ಮ ನೌಕರರಿಗೆ ಶಾಸನ ಬದ್ಧವಾದ ರೀತಿಯಲ್ಲಿ ವೇತನ ಪಾವತಿಸತಕ್ಕದ್ದು ಹಾಗೂ ಇದಕ್ಕೆ ಒಕ್ಕೂಟವು ಜವಾಬ್ದಾರಿಯಾಗಿರುವುದಿಲ್ಲ.
9. ತಾಂತ್ರಿಕ/ಯಾಂತ್ರಿಕ ಕಾರಣಗಳಿಂದ ಬಿ.ಎಂ.ಸಿ ಕೇಂದ್ರಗಳೇನಾದರೂ ಸ್ಥಗಿತಗೊಂಡು ಟ್ಯಾಂಕರ್ ಮೂಲಕ ಹಾಲು ಸಾಗಾಣಿಕೆ ಸ್ಥಗಿತಗೊಂಡಲ್ಲಿ ಹಾಲಿನ ಟ್ಯಾಂಕರ್‌ಗಳು ಚಲಿಸಿದ ಅಂತರಕ್ಕೆ ಮಾತ್ರ ಹಣ ಪಾವತಿಸಲಾಗುವುದು.

## ಕ್ರಮ ಸಂಖ್ಯೆ (2) ರ ಹಾಲು ವಿತರಣಾ ಮಾರ್ಗಗಳಿಗೆ ಸಂಬಂಧಿಸಿದಂತೆ ಷರತ್ತು ಮತ್ತು ನಿಬಂಧನೆಗಳು

1. ಟೆಂಡರ್ ಸಲ್ಲಿಸ ಬಯಸುವವರು ತಮ್ಮ ಹೆಸರಿಗೆ ಕಡ್ಡಾಯವಾಗಿ ವಾಹನವನ್ನು ಹೊಂದಿರತಕ್ಕದ್ದು. ವಾಹನ ಹೊಂದಿಲ್ಲದವರು ಟೆಂಡರ್‌ನಲ್ಲಿ ದರ ಒಪ್ಪಿಗೆಯಾದಲ್ಲಿ ಟೆಂಡರ್ ದರ ಒಪ್ಪಿಗೆ ಆದೇಶ ನೀಡಿದ 30 ದಿನಗಳೊಳಗಾಗಿ ಟೆಂಡರ್‌ನಲ್ಲಿ ಪ್ರಕಟಿಸಿದ ಮಾದರಿಯ/ಸಾಮರ್ಥ್ಯದ ವಾಹನವನ್ನು ಖರೀದಿಸಿ ನೀಡುವುದು. ತಪ್ಪಿದ್ದಲ್ಲಿ ಟೆಂಡರ್ ನಿಯಮಾನುಸಾರ ಇ.ಎಂ.ಡಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
2. ಇ-ಪ್ರೋಕ್ಯೂರ್‌ಮೆಂಟ್ ನಿಯಾಮವಳಿ ಅಡಿ ನೊಂದಣಿ ಮಾಡಿಸದ ಗುತ್ತಿಗೆದಾರರು ನೊಂದಣಿ ಮಾಡಿಸಿ ಗುತ್ತಿಗೆ ಅರ್ಜಿ ಸಲ್ಲಿಸಬಹುದು.
3. ಕನಿಷ್ಠ ಇ.ಎಂ.ಡಿ. ರೂ. 25,000/- ಆದರೆ ವಿತರಣಾ ಮಾರ್ಗದ ವಾಹನಗಳಿಗೆ ಅವುಗಳ ಮುಂದೆ ಸೂಚಿಸಿರುವಂತೆ ಇ.ಎಂ.ಡಿ ಬಾಬ್ತು ಡಿ.ಡಿ.ಯನ್ನು ಇ-ಪ್ರೋಕ್ಯೂರ್‌ಮೆಂಟ್ ವೇದಿಕೆಯ ನಿಯಾಮವಳಿಯಂತೆ ಸಲ್ಲಿಸುವುದು. ಕಡಿಮೆ ಇ.ಎಂ.ಡಿ ಪಾವತಿಸಿದಲ್ಲಿ ಟೆಂಡರ್‌ನ್ನು ತಿರಸ್ಕರಿಸಲಾಗುವುದು.
4. ಪ್ರತಿ ಮಾರ್ಗಕ್ಕೆ ಪ್ರತ್ಯೇಕ ಟೆಂಡರ್ ಮತ್ತು ಇ.ಎಂ.ಡಿ ಸಲ್ಲಿಸುವುದು. ಪ್ರತಿ ಕಿ.ಮೀ.ಗೆ ದರ ನಮೂದಿಸುವುದು ಮತ್ತು ದರವು ಎಲ್ಲಾ ತೆರಿಗೆಗಳನ್ನು ಒಳಗೊಂಡಿರುತ್ತದೆ. ಹಾಲು ವಿತರಣೆ ವಾಹನಕ್ಕೆ ಹಾಗೂ ಕಾರುಗಳಿಗೆ ರಾಜ್ಯ/ರಾಷ್ಟ್ರೀಯ ಹೆದ್ದಾರಿ ಶುಲ್ಕಗಳನ್ನು ಒಕ್ಕೂಟದ ವತಿಯಿಂದ ನೀಡಲಾಗುವುದಿಲ್ಲ ಮತ್ತು ಸೇವಾ ತೆರಿಗೆಯನ್ನು ಗುತ್ತಿಗೆದಾರರೆ ಭರಿಸಬೇಕಾಗಿರುತ್ತದೆ.
5. ಹಾಲು ವಿತರಣಾ ವಾಹನಗಳು 2006 ನೇ ಸಾಲಿನ ಅಥವಾ ನಂತರದ ಮಾಡೆಲ್ ಆಗಿರಬೇಕು. ಹಳದಿ ಬೋರ್ಡ್ ಹೊಂದಿದ್ದು ವಾಹನ ಚಾಲಕರು ಚಾಲನಾ ಪರವಾನಗಿ ಹಾಗೂ ಬ್ಯಾಡ್ಜ್ ಹೊಂದಿರತಕ್ಕದ್ದು.
6. ಹಾಲು ವಿತರಣಾ ಮಾರ್ಗದ ವಾಹನಗಳ ಪಥವನ್ನು ಕಛೇರಿಗೆ ಅವಶ್ಯ ಬಂದಲ್ಲಿ ಬದಲಾಯಿಸಲಾಗುವುದು. ಈ ಸಂದರ್ಭದಲ್ಲಿ ಕಿ.ಮೀ. ಅಂತರ ಕಡಿಮೆ ಅಥವಾ ಹೆಚ್ಚಿಗೆ ಆಗುವ ಸಾಧ್ಯತೆ ಇರುತ್ತದೆ. ಶೇ. 10 ಕ್ಕಿಂತ ಜಾಸ್ತಿ ಅಥವಾ ಕಡಿಮೆ ಆದಲ್ಲಿ ಪ್ರೋರೆಟಾ ಆಧಾರದಲ್ಲಿ ದರವನ್ನು ಕಡಿಮೆ ಅಥವಾ ಹೆಚ್ಚು ಮಾಡಲಾಗುವುದು.
7. ಗುತ್ತಿಗೆದಾರರ ಸೇವೆ ತೃಪ್ತಿಕರವಾಗಿರದಿದ್ದಲ್ಲಿ ಮಾರ್ಗಗಳ ಪುನರ್ ವಿಂಗಡಣೆ ಮತ್ತು ಮಾರ್ಗಗಳ ಗುತ್ತಿಗೆ ರದ್ದುಮಾಡುವುದು. ಇವುಗಳ ಬಗ್ಗೆ ತನ್ನ ಹಿತದೃಷ್ಟಿಯಿಂದ ಒಕ್ಕೂಟವು ಅವಶ್ಯಕತೆಗನುಗುಣವಾಗಿ ತೆಗೆದುಕೊಳ್ಳುವ ನಿರ್ಣಯಗಳಿಗೆ ಗುತ್ತಿಗೆದಾರರು/ ಟೆಂಡರ್‌ದಾರರು ಬದ್ಧವಾಗಿರಬೇಕು.

ಮುಂದುವರೆದಿದೆ . . .

8. ಷಟಲ್ ಮಾರ್ಗದ ಗುತ್ತಿಗೆದಾರರು ಮುಖ್ಯ ಮಾರ್ಗದಿಂದ ಪಡೆದ ಹಾಲು ಮತ್ತು ಹಾಲಿನ ಉತ್ಪನ್ನಗಳ ಮೊತ್ತ, ಖಾಲಿ ಕ್ರೇಟ್‌ಗಳನ್ನು, ಕ್ಯಾನ್‌ಗಳನ್ನು ನಿಗದಿತ ಸ್ಥಳ ಮತ್ತು ಸಮಯದಲ್ಲಿ ಪಡೆಯುವುದು ಮತ್ತು ನೀಡುವುದು.
9. ಹಾಲು ವಿತರಣಾ ಮಾರ್ಗದ ಗುತ್ತಿಗೆದಾರರು ಹಾಲು ಮತ್ತು ಹಾಲಿನ ಉತ್ಪನ್ನಗಳ ಒಟ್ಟು ಮೊತ್ತವನ್ನು ಆಯಾ ದಿನವೇ ನಿಗಧಿತ ವೇಳೆಗೆ ಕಚೇರಿ/ಬ್ಯಾಂಕಿಗೆ ಪಾವತಿಸುವುದು. ಪೂರ್ಣ ಮೊತ್ತ ಪಾವತಿಸದೇ ಬಾಕಿ ಉಳಿಸಿಕೊಂಡಲ್ಲಿ ಮೊದಲ ದಿನ ಹಾಗೂ 2 ನೇ ದಿನದ ಬಾಕಿ ಮೊತ್ತಕ್ಕೆ ಶೇ 2% ರಷ್ಟು ದಂಡದ ಮೊತ್ತವನ್ನು 3 ನೇ ದಿನಕ್ಕೆ ಪಾವತಿಸುವುದು. 3 ನೇ ದಿನವೂ ಬಾಕಿ ಉಳಿಸಿಕೊಂಡಲ್ಲಿ ದಿನದ ಬಾಕಿ ಮೊತ್ತಕ್ಕೆ ಶೇ 3% ರಷ್ಟು ಬಡ್ಡಿ ಸೇರಿಸಿ ಪಾವತಿಸತಕ್ಕದ್ದು ಮತ್ತು ನಂತರವೂ ಪಾವತಿಸದಿದ್ದಲ್ಲಿ ಒಕ್ಕೂಟದ ನಿಯಮಾನುಸಾರ ಗುತ್ತಿಗೆ ರದ್ದುಪಡಿಸಲು ಕ್ರಮವಿಡಲಾಗುವುದು.
10. ಎಲ್ಲಾ ಸಾರಿಗೆ ಟೆಂಡರ್‌ದಾರರು ಶಾಸನ ಬದ್ಧವಾದ ರೀತಿಯಲ್ಲಿ ತಮ್ಮ ನೌಕರರಿಗೆ (ಚಾಲಕರು/ಕಂಡಕ್ಟರ್) ವೇತನ/ಭವಿಷ್ಯನಿಧಿ/ ಇ.ಎಸ್.ಐ ಮುಂತಾದವುಗಳನ್ನು ಪಾವತಿಸಬೇಕಾಗಿರುತ್ತದೆ. ಟೆಂಡರ್ ಪಡೆದ ಸಾರಿಗೆ ಗುತ್ತಿಗೆದಾರರೇ ತಮ್ಮ ನೌಕರರಿಗೆ ಶಾಸನ ಬದ್ಧವಾದ ರೀತಿಯಲ್ಲಿ ವೇತನ ಪಾವತಿಸತಕ್ಕದ್ದು ಹಾಗೂ ಇದಕ್ಕೆ ಒಕ್ಕೂಟವು ಜವಾಬ್ದಾರಿಯಾಗಿರುವುದಿಲ್ಲ.

**ಯಾವುದೇ ಕಾರಣ ನೀಡದೆ ಟೆಂಡರನ್ನು ಅಂಗಿಕರಿಸುವ /ತಿರಸ್ಕರಿಸುವ ಹಕ್ಕನ್ನು ವ್ಯವಸ್ಥಾಪಕ ನಿರ್ದೇಶಕರು ಹೊಂದಿರುತ್ತಾರೆ. ವ್ಯವಸ್ಥಾಪಕ ನಿರ್ದೇಶಕರ ತೀರ್ಮಾನವೆ ಅಂತಿಮವಾದುದು.**

ಹೆಚ್ಚಿನ ಮಾಹಿತಿಯನ್ನು ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಹಾಲು ಒಕ್ಕೂಟದ ಕಛೇರಿ ವೇಳೆಯಲ್ಲಿ ಪಡೆಯಬಹುದು. **ದೂರವಾಣಿ : 08182-246170.**

**www.shimul.coop**

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ
ಸಹಕಾರ ಹಾಲು ಒಕ್ಕೂಟ, ನಿ.,

ದಿನಾಂಕ 19.10.2016
ಸ್ಥಳ : ಶಿವಮೊಗ್ಗ ಡೈರಿ